ಚಿಕಿತ್ಸೆ ನೀಡಿ ಪ್ರಾಣ ಹಾನಿ ತಪ್ಪಿಸಲು ಹಾಲಿ ಇರುವ ಸಾರ್ವಜನಿಕ ಆಸ್ಪತ್ರೆಗಳಿಗೆ ಸೌಲಭ್ಯ ಮತ್ತು ಸವಲತ್ತುಗಳನ್ನು ಒದಗಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು.

ಆ) ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನಾ ಅಡಿಯಲ್ಲಿ ರಾಜ್ಯದ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಸಂಭವಿಸಬಹುದಾದ ಅಪಘಾತಗಳಿಂದಾದ ಗಾಯಾಳುಗಳಿಗೆ ತುರ್ತು ಚಿಕಿತ್ಸೆ ಒದಗಿಸುವ ದೃಷ್ಟಿಯಿಂದ ನೆಲಮಂಗಲ ಪಟ್ಟಣದಲ್ಲಿ ತುರ್ತು ಚಿಕಿತ್ಸಾ ಘಟಕವನ್ನು ಸ್ಥಾಪಿಸಲಾಗಿದೆ. ಈ ಘಟಕದಲ್ಲಿ ಒಂದು ಶಸ್ತ್ರ ಚಿಕಿತ್ಸಾ ಕೊಠಡಿ ಹತ್ತು ಹಾಸಿಗೆಗಳ ಸಾಮರ್ಥ್ಯದ ಒಂದು ವಾರ್ಡ್ ಇದ್ದು ಎಕ್ಸರೇ ಉಪಕರಣಗಳನ್ನು ಒದಗಿಸಲಾಗಿದೆ. ಒಂದು ಸುಸಜ್ಜಿತ ತುರ್ತು ವಾಹನವನ್ನು ಸಹಾ ಒದಗಿಸಲಾಗಿದೆ.

ರಾಜ್ಯದಲ್ಲಿರುವ ವೃತ್ತಿಪರ ಶಿಕ್ಷಕರ ಖಾಲಿ ಹುದ್ದೆಗಳು

948 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಪ್ರೌಢ ಮತ್ತು ಪ್ರಾಥಮಿಕ ಶಾಲೆಯಲ್ಲಿ ಎಷ್ಟು ವೃತ್ತಿ ಪರ (ತೋಟಗಾರಿಕೆ) ಶಿಕ್ಷಕರ ಹುದ್ದೆ ಖಾಲಿ ಇದೆ?

ಆ) ಕೊಡಗು ಜಿಲ್ಲೆಯಲ್ಲಿ ಎಷ್ಟು ಖಾಲಿ ಇದೆ?

ಇ) ಇದನ್ನು ತುಂಬಲು ಸರ್ಕಾರವು ಏನು ಕ್ರಮಕೈಗೊಳ್ಳುವುದು, ಇವುಗಳನ್ನು ಯಾವಾಗ ತುಂಬಲಾಗುತ್ತದೆ, (ವಿವರ ಒದಗಿಸುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಇಲ್ಲಾ.

ಆ) ಇಲ್ಲಾ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಸೋಮವಾರ ಪೇಟೆ ತಾಲ್ಲೂಕು ಮುರಾರ್ಜಿ ವಸತಿ ನಿಲಯ

949 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೋಮವಾರಪೇಟೆ ತಾಲ್ಲೂಕು, ಕುಶಾಲನಗರ ಹೋಬಳಿ, ಬಸವನಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಎಷ್ಟು ಹಣ ನಿಗದಿಪಡಿಸಲಾಗಿದೆ?

ಅ) ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಇ) ಕಟ್ಟಡದ ಕೆಲಸ ಎಷ್ಟು ಆಗಿದೆ?

ಈ) ಈ ಶಾಲೆಯನ್ನು ಪಿ.ಯು.ಸಿ ಮುಂದುವರೆಸುವ ಉದ್ದೇಶ ಸರ್ಕಾರಕ್ಕೆ ಇದೆಯೇ? (ಪೂರ್ಣ ಮಾಹಿತಿ ಒದಗಿಸುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ರೂ. 25.00 ಲಕ್ಷಗಳನ್ನು ಶಾಲೆಯ ನಿರ್ವಹಣೆಗಾಗಿಯೂ ಮತ್ತು ರೂ. 25.00 ಲಕ್ಷಗಳನ್ನು ಶಾಲಾ ಕಟ್ಟಡದ ನಿರ್ಮಾಣಕ್ಕಾಗಿ ನಿಗದಿಪಡಿಸಿದೆ.

ಆ) ಶಾಲೆಯ ನಿರ್ವಹಣೆಗಾಗಿ ರೂ. 25.00 ಲಕ್ಷಗಳು ಮತ್ತು ಶಾಲಾ ಕಟ್ಟಡದ ನಿರ್ಮಾಣಕ್ಕಾಗಿ ರೂ. 25.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಇ) ಕಟ್ಟಡದ ನಿರ್ಮಾಣದ ಕೆಲಸ ಪ್ರಾರಂಭದ ಹಂತದಲ್ಲಿದೆ.

ಈ) ಇಲ್ಲ.

ಗುಲ್ಬರ್ಗಾ ಜಿಲ್ಲೆಯ ಸೇಡಂ ಮತ್ತು ಚಿತ್ತಪುರ ತಾಲ್ಲೂಕುಗಳಿಗೆ ಔಷಧಿಗಳ ಪೂರೈಕೆಯ ಖರ್ಚು ವಿವರ

950 - ಶ್ರೀ ಬಸವಂತ ರೆಡ್ಡಿ ಮೊತಕಪಲ್ಲಿ (ಸೇಡಂ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕು ಮತ್ತು ಚಿತ್ತಪುರ ತಾಲ್ಲೂಕಿನ ಕೆಲ ಭಾಗ ಸಾರ್ವಜನಿಕ ಆಸ್ಪತ್ರೆ ಸೇಡಂ ಮತ್ತು ಸೇಡಂ ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 1997-98, 1998-99, 1999-2000 ಸಾಲಿನಲ್ಲಿ ಔಷಧಿಗಳ ಪೂರೈಕೆಗೆ ಖರ್ಚು ಆಗಿರುವ ಹಣವೆಷ್ಟು? (ಆಸ್ಪತ್ರೆವಾರು ವಿವರ ಒದಗಿಸುವುದು).

ಆ) ಒಂದು ವೇಳೆ ಖರ್ಚಾದರೆ ಆಸ್ಪತ್ರೆ ಹಾಗೂ ಪ್ರಾಥಮಿಕ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆಯುವ ನಾಗರೀಕರು ಆಸ್ಪತ್ರೆಗಳಲ್ಲಿ ಯಾವುದೇ ಒಂದು ಮಾತ್ರೆ ಸಹ ನೀಡುವುದಿಲ್ಲವೆಂದು ದೂರು ಮಾಡುವುದು ಏಕೆ?

ಇ) ಇದರ ಬಗ್ಗೆ ಕ್ರಮ ಕೈಗೊಂಡು ಆಸ್ಪತ್ರೆಗಳನ್ನು ಸರಿಪಡಿಸಿ ಸಾರ್ವಜನಿಕರಿಗೆ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸುವುದು ಎಂದು?

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸರ್ಕಾರದಿಂದ ಆಸ್ಪತ್ರೆಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ